Soopi

# ಕರ್ನಾಟಕ ಸರ್ಕಾರ

ಸಂಖ್ಯೆ : ಇಡಿ 558 ಪಿಜಿಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 16-11-2016

## ಸುತ್ತೋಲೆ

ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 512 ಪಿಜಿಸಿ 2015, ದಿನಾಂಕ 25.07.2016ರಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 512 ಪಿಜಿಸಿ 2015, ದಿನಾಂಕ 18.01.2016ರಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ ಮಾತ್ರ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 369 ಪಿಜಿಸಿ 2014, ದಿನಾಂಕ: 11.11.2014ನ್ನು ರದ್ದುಗೊಳಿಸಿ ಕರ್ನಾಟಕ ಶಿಕ್ಷಣ ಅಧಿನಿಯಮ 1983ರ ಸೆಕ್ಷನ್ 30 ಮತ್ತು 31 ಮತ್ತು ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ ಮತ್ತು ನೋಂದಣಿ), ನಿಯಮ 1997ರ ನಿಯಮ-3ರನ್ವಯ ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿಗೆ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದೆ. ಸದರಿ ಅಧಿಸೂಚನೆಯಲ್ಲಿ ಮೂಲಭೂತ ಸೌಕರ್ಯಗಳ ಮಾದರಿ, ಪಾವತಿಸಬೇಕಾದ ಶುಲ್ಕ ಮತ್ತು ನೋಂದಣಿಗೆ ಸಲ್ಲಿಸಬೇಕಾದ ದಾಖಲೆಗಳನ್ನು ನಿಗದಿಪಡಿಸಲಾಗಿದ್ದು, ಈ ಪ್ರಕ್ರಿಯೆಗೆ ಸಂಬಂಧಿಸಿದಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ವತಿಯಿಂದ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ http//Scholleducation.kar.nic.in ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿದ್ದು ಈ ವೆಬ್‌ಸೈಟ್‌ನಲ್ಲಿ ಸ್ಪಷ್ಟಪಡಿಸಿರುವ ದಾಖಲೆಗಳನ್ನು ಹೊರತುಪಡಿಸಿ, ಇತರೆ ಅನವಶ್ಯಕ ದಾಖಲಾತಿಗಳನ್ನು ಕೆಲವೊಂದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಿಂದ ಕೇಳಲಾಗುತ್ತಿದೆ ಎಂಬ ಅಂಶವು ಸರ್ಕಾರದ ಗಮನಕ್ಕೆ ಬಂದ ನಂತರ ಈ ಅಂಶವನ್ನು ಸರ್ಕಾರವು ತೀವ್ರತರವಾಗಿ ಪರಿಗಣಿಸಿ ವೆಬ್‌ಸೈಟ್‌ನಲ್ಲಿ ಸ್ಪಷ್ಟಪಡಿಸಿರುವ ದಾಖಲೆಗಳನ್ನು ಹೊರತುಪಡಿಸಿ, ಬೇರೆ ಯಾವುದೇ ದಾಖಲೆಗಳನ್ನು ಒದಗಿಸುವಂತೆ ಕೋರುವ ಅಧಿಕಾರಿಗಳ ಮೇಲೆ ನಿಯಮಾನುಸಾರ ಕ್ರಮ ಜರುಗಿಸಲಾಗುವುದು ಎಂದು ಸುತ್ತೋಲೆ ಮೂಲಕ ಸೂಚಿಸಲಾಗಿತ್ತು.

ಹೀಗಿದ್ದಾಗ್ಯೂ ಸಹ ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿಗೆ ಸಂಬಂಧಿಸಿದಂತೆ, ಬೆಂಗಳೂರು ಸೇರಿದಂತೆ, ಇತರೆ ಜಿಲ್ಲೆಗಳ ಕೆಲವೊಂದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳು ದಿ: 25.07.2016ರ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ದಾಖಲೆಗಳ ಹೊರತಾಗಿಯೂ ಅನಗತ್ಯವಾಗಿ ಇತರೆ ದಾಖಲೆಗಳನ್ನು ಒದಗಿಸುವಂತೆ ಕೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಸರ್ಕಾರವು ಇದನ್ನು ತೀವ್ರವಾಗಿ ಪರಿಗಣಿಸಿದೆ. ದಿ: 25.07.2016ರ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ದಾಖಲೆಗಳನ್ನು ಮಾತ್ರ ಪಡೆದು ನೋಂದಣಿ ಬಗ್ಗೆ ಕ್ರಮವಹಿಸುವಂತೆ ಮತ್ತೊಮ್ಮೆ ಸೂಚಿಸಿದೆ. ಇದರ ಹೊರತಾಗಿ, ಬೇರೆ ಯಾವುದೇ ದಾಖಲೆಗಳನ್ನು, ಯಾವುದೇ ಕಾರಣಕ್ಕೂ ನೀಡಲು ಒತ್ತಾಯಪಡಿಸುವ ಅಧಿಕಾರಿ/ಸಿಬ್ಬಂದಿ ವಿರುದ್ಧ ತೀವ್ರತರವಾದ ಕ್ರಮ ಕೈಗೊಳ್ಳಲಾಗುವುದು ಈ ಮೂಲಕ ತಿಳಿಸಲಾಗಿದೆ.

DPI (P) 8/23/11

(ರೇವಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
16/11/16 ಶಿಕ್ಷಣ ಇಲಾಖೆ (ಪ್ರಾಥಮಿಕ)

ಸಂಕಲನಕಾರರು, ಕರ್ನಾಟಕ ರಾಜ್ಯ ವಿಶೇಷ ಪತ್ರ, ಬೆಂಗಳೂರು- ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 500 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.

ಇವರಿಗೆ :-

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ

3. ನಿರ್ದೇಶಕರು, ಪ್ರಾಥಮಿಕ/ಪ್ರೌಢ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಕಲಬುರಗಿ.
4. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರು (ಆಡಳಿತ)/ಉಪ ನಿರ್ದೇಶಕರು (ಅಭಿವೃದ್ಧಿ)/ಕ್ಷೇತ್ರ ಶಿಕ್ಷಣಾಧಿಕಾರಿಗಳು/ಕ್ಷೇತ್ರ ಸಂಪನ್ಮೂಲ ಅಧಿಕಾರಿಗಳು– ಸಂಬಂಧಿಸಿದ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ